ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಲಾಕ್‌ಡೌನ್ ಪ್ರಯುಕ್ತ ಸಂಕಷ್ಟದಲ್ಲಿರುವ ಹೂ ಬೆಳೆಗಾರರಿಗೆ ಪರಿಹಾರ ಮೊತ್ತ ನೀಡುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

925(1092) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಗೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-19 ಕಾರಣಕ್ಕಾಗಿ ದೇಶದಲ್ಲಿ ವಿಧಿಸಿದ ಲಾಕ್‌ಡೌನ್ ಸಂದರ್ಭದಲ್ಲಿ ಹೂವಿನ ಬೆಳೆಗಾರರಿಗೆ ಉಂಟಾದ ನಷ್ಟಕ್ಕೆ ಪರಿಹಾರ ನೀಡಲು ಸರ್ಕಾರ ಭರವಸೆ ನೀಡಿದ್ದು, ಈವರೆಗೆ ರಾಜ್ಯದಲ್ಲಿ ಪರಿಹಾರ ಪಡೆದ ಹೂ ಬೆಳೆಗಾರರ ಸಂಖ್ಯೆ ಎಷ್ಟು ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹೂ ಬೆಳೆಗಾರರು ಹೆಸರು ನೋಂದಣಿ ಮಾಡಿಕೊಂಡಿದ್ದಾರೆ ;

(ಇ) ಅದರಲ್ಲಿ ಎಷ್ಟು ಜನರಿಗೆ ಪರಿಹಾರ ಮೊತ್ತ ದೊರಕಿದೆ;

(ಈ) ಬೆಳಗಾವಿ ಜಿಲ್ಲೆಯ ಹೂ ಬೆಳಗಾರರಿಗೆ ಪರಿಹಾರದ ಮೊತ್ತ ಇನ್ನೂ ತಲುಪಿಲ್ಲವೆಂಬ ಕೂಗು ಕೇಳಿಬರುತ್ತಿದ್ದು, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?